ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ರೇಷ್ಮೆ ಬೆಳೆಗಾರರ ಸಂಕಷ್ಟದ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

156 (178) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರೇಷ್ಮೆ ಬೆಳೆಗಾರರು ಅನೇಕ ಸಂಕಷ್ಟಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಒಂದು ವರ್ಷದಿಂದ ರೇಷ್ಮೆ ಗೂಡಿನ ಬೆಲೆಯು ತೀವ್ರ ಕುಸಿತ ಕಂಡಿದ್ದು, ಬೆಳೆಗಾರರು ಸಂಕಷ್ಟದಲ್ಲಿದ್ದು, ಇವರುಗಳಿಗೆ ಸರ್ಕಾರ ಯಾವ ಪರಿಹಾರವನ್ನು ಕಲ್ಪಿಸಿದೆ ;

(ಇ) ರೇಷ್ಮೆ ಗೂಡಿಗೆ ಸರ್ಕಾರವು ಪ್ರೋತ್ಸಾಹಧನವನ್ನು ನೀಡುತ್ತಿದ್ದು, ಅದನ್ನು ಈಗ ರೈತರಿಗೆ ನೀಡುವ ಕುರಿತು ಕ್ರಮ ಕೈಗೊಳ್ಳುವುದೇ;

(ಈ) ಸದರಿ ಇಲಾಖೆಯಲ್ಲಿ ಮಂಜೂರಾದ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆಯಲ್ಲಿ ಅರ್ಧದಷ್ಟು ಹುದ್ದೆಗಳು ಖಾಲಿ ಇದ್ದು, ರೈತರಿಗೆ ತಾಂತ್ರಿಕತೆ ಹಾಗೂ ಸಹಾಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?